## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1149 (1346) |
| ಸದಸ್ಯರ ಹೆಸರು | : | ಡಾ|| ವೈ.ಎ.ನಾರಾಯಣಸ್ವಾಮಿ |
| ಉತ್ತರಿಸುವ ದಿನಾಂಕ | : | 18.03.2020 |
| ಉತ್ತರಿಸುವ ಸಚಿವರು | : | ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು |

| ಕ್ರ. ಸಂ | ವಿಷಯ | ಉತ್ತರ |
|---|---|---|
| ಅ) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ನಡೆಯುತ್ತಿರುವ ಶಾಲಾ ಕಾಲೇಜುಗಳನ್ನು ಸಮಾಜ ಕಲ್ಯಾಣ ಇಲಾಖೆ ಸುಪರ್ದಿಗೆ ನೀಡಲು ಸರ್ಕಾರ ಯೋಚಿಸಿದೆಯೇ; (ವಿವರಗಳನ್ನು ನೀಡುವುದು) | ವಿವಿಧ ಉದ್ದೇಶಗಳನ್ನು ಈಡೇರಿಸುವ ಸಲುವಾಗಿ ಸರ್ಕಾರದಲ್ಲಿ ಸಂಘ/ ಮಂಡಳಿ/ ನಿಗಮಗಳನ್ನು ಸ್ಥಾಪಿಸಲಾಗಿರುತ್ತದೆ. ಅದರಂತೆ ಸಮಾಜಕಲ್ಯಾಣ ಇಲಾಖೆಯಲ್ಲಿ ಸಹ ಗ್ರಾಮೀಣ ಪ್ರದೇಶದ ಬಡ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಲು ವಸತಿ ಶಾಲೆಗಳನ್ನು ಪ್ರಾರಂಭಿಸಿ ನಿರ್ವಹಿಸಲು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಸ್ಥಾಪಿಸಲಾಗಿದೆ.<br>ಈ ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳಂತೆ ಬೋದಕ ಮತ್ತು ಬೋದಕೇತರ ಸಿಬ್ಬಂದಿಗಳನ್ನು ನೇಮಿಸಲಾಗುತ್ತಿದೆ. ಮಂಜೂರಾದ ಗ್ರೂಪ್-ಡಿ ಹುದ್ದೆಗಳನ್ನು ಆರ್ಥಿಕ ಇಲಾಖೆಯ ನಿರ್ದೇಶನದನ್ವಯ ಹೊರಗುತ್ತಿಗೆ ಆಧಾರದಲ್ಲಿ ನೇಮಿಸಿಕೊಳ್ಳಲಾಗುತ್ತಿದೆ. ಶಿಕ್ಷಣ ಇಲಾಖೆಯಿಂದ ನೇಮಿಸಿಕೊಂಡಿರುವ ಶಿಕ್ಷಕರುಗಳಿಗೆ ನೀಡುವ ವೇತನದಂತೆಯೇ ಸಂಘದ ಶಿಕ್ಷಕರುಗಳಿಗೂ ಸಹ ನೀಡಲಾಗುತ್ತಿದೆ.<br>ಅಲ್ಲದೇ ಶಾಲೆ ಆವರಣದಲ್ಲಿ ಎಲ್ಲಾ ಬೋದಕ/ ಬೋದಕೇತರ ಸಿಬ್ಬಂದಿಗಳಿಗೆ ವಸತಿ ಸೌಕರ್ಯ ಮತ್ತು ಇತರೇ ಸವಲತ್ತುಗಳನ್ನು ನೀಡಲಾಗುತ್ತಿದೆ.<br>ಸಂಘವು ಕರ್ನಾಟಕ ಸಹಕಾರ ಸಂಘಗಳ ನೋಂದಣಿ ಕಾಯ್ದೆ 1960 ರಡಿಯಲ್ಲಿ ಸ್ಥಾಪಿತವಾದ ಸಂಸ್ಥೆಯಾಗಿದ್ದು, ಸ್ವಾಯತ್ತ ಸಂಸ್ಥೆ / ಸಂಘ ಸಂಸ್ಥೆಗಳ ಸಿಬ್ಬಂದಿಗಳನ್ನು ರಾಜ್ಯ ಸಿವಿಲ್ ಸೇವೆಯಲ್ಲಿ ವಿಲೀನಗೊಳಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| ಆ) | ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಪ್ರಾಂಶುಪಾಲರು ಹಾಗೂ ಶಿಕ್ಷಕರು ಸವಲತ್ತುಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಪ್ರಾಂಶುಪಾಲರು ಹಾಗೂ ಶಿಕ್ಷಕರುಗಳಿಗೆ ಕೆ.ಜಿ.ಐ.ಡಿ., ಜ್ಯೋತಿ ಸಂಜೀವಿನಿ, ಒಂದು ವಿಶೇಷ ವೇತನ ಬಡ್ತಿ ಮತ್ತು ದಿನಾಂಕ: 01.04.2018 ರಿಂದ ಜಾರಿಗೆ ಬರುವಂತೆ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಹೊರತುಪಡಿಸಿ ಶಿಕ್ಷಣ |

| | | |
|---|---|---|
| ಇ) | ಬಂದಿದ್ದರೆ, ಶಿಕ್ಷಣ ಇಲಾಖೆಯಲ್ಲಿ ನೀಡುತ್ತಿರುವ ಎಲ್ಲಾ ಸವಲತ್ತುಗಳನ್ನು ಮೇಲ್ಕಂಡ ಎಲ್ಲಾ ಶಿಕ್ಷಕರುಗಳಿಗೆ ವಿಸ್ತರಿಸಲು ಸರ್ಕಾರಕ್ಕೆ ಇರುವ ತೊಂದರೆ ಏನು? | ಇಲಾಖೆಯ ಶಿಕ್ಷಕರುಗಳಿಗೆ ನೀಡುತ್ತಿರುವ ಎಲ್ಲಾ ಸವಲತ್ತುಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಖಾಯಂ ಶಿಕ್ಷಕರುಗಳಿಗೆ ನೀಡಲಾಗುತ್ತಿದೆ. ಮುಂದುವರೆದು ನೂತನ ಪಿಂಚಣಿ ಯೋಜನೆಯನ್ನು ಸಹ ಶಿಕ್ಷಕರುಗಳು ಸೇವೆಗೆ ಸೇರಿದ ದಿನಾಂಕದಿಂದ ವಿಸ್ತರಿಸಲಾಗಿದೆ. |

ಸಕಇ 108 ಮೊದೇಶಾ 2020

**(ಗೋವಿಂದ ಎಂ. ಕಾರಜೋಳ)**
ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ
ಮತ್ತು ಸಮಾಜ ಕಲ್ಯಾಣ ಸಚಿವರು